(40) **ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ)** :– ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಭಾಲ್ಕಿ ವಿಧಾನ ಸಭಾ ಕ್ಷೇತ್ರದಲ್ಲಿ ಈ ಬಾರಿ ಎಸ್.ಎಸ್.ಎಲ್.ಸಿ. ಪರೀಕ್ಷೆಗೆ ಹಾಜರಾಗಿದ್ದು ವಿದ್ಯಾರ್ಥಿ/ವಿದ್ಯಾರ್ಥಿನಿಯರ ಸಂಖ್ಯೆ ಎಷ್ಟು ;

ಆ) ಈ ಪೈಕಿ ಉತ್ತೀರ್ಣರಾದ ಮತ್ತು ಅನುತ್ತೀರ್ಣರಾದ ವಿದ್ಯಾರ್ಥಿ/ವಿದ್ಯಾರ್ಥಿನಿಯರ ಸಂಖ್ಯೆ ಎಷ್ಟು ;

ಇ) ಶೇಕಡಾವಾರು ಫಲಿತಾಂಶದಲ್ಲಿ ಕುಸಿತ ಕಂಡುಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

ಈ) ಹಾಗಿದ್ದಲ್ಲಿ, ಇದಕ್ಕೆ ಕಾರಣಗಳೇನು ;

ಉ) ಮುಂಬರುವ ವರ್ಷಗಳಲ್ಲಿ ಇದೇ ರೀತಿಯ ಫಲಿತಾಂಶ ಬಂದಲ್ಲಿ ಇದಕ್ಕೆ ಸಂಬಂಧಪಟ್ಟ ಶಾಲೆ ಶಿಕ್ಷಕರುಗಳನ್ನು ಮತ್ತು ಮುಖ್ಯೋಪಾಧ್ಯಾಯರನ್ನು ಹೊಣೆಗಾರರನ್ನಾಗಿ ಮಾಡುವ ಬಗ್ಗೆ ಸರ್ಕಾರ ಚಿಂತನೆ ಮಾಡುವುದೇ ;

ಊ) ಹಾಗಿದ್ದಲ್ಲಿ, ಮುಂಬರುವ ವರ್ಷಗಳಲ್ಲಿ ಶಿಕ್ಷಣದ ಗುಣಮಟ್ಟವನ್ನು ಹೆಚ್ಚಿಸಲು ಹಾಗೂ ಉತ್ತಮವಾದ ಫಲಿತಾಂಶವನ್ನು ದೊರಕಿಸಿ ಕೊಡಲು ಸರ್ಕಾರ ರೂಪಿಸಿರುವ ಯೋಜನೆಗಳೇನು ?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು):–

ಅ) ಮಾರ್ಚ್ 2008ರ ಎಸ್.ಎಸ್.ಎಲ್.ಸಿ. ಪರೀಕ್ಷೆಗೆ ಹಾಜರಾದ ವಿದ್ಯಾರ್ಥಿಗಳು.

ಗಂಡು 2704

ಹೆಣ್ಣು 2180

ಒಟ್ಟು 4884

ಆ) ಉತ್ತೀರ್ಣರಾದವರು	ಅನುತ್ತೀರ್ಣರಾದವರು
ಗಂಡು 889	ಗಂಡು 1815
ಹೆಣ್ಣು 653	ಹೆಣ್ಣು 1527
ಒಟ್ಟು 1542	**ಒಟ್ಟು 3342**

ಇ) ಹೌದು

ಈ) 1. ಸರ್ಕಾರಿ ಪ್ರೌಢಶಾಲೆಗಳಲ್ಲಿ ಸೇವೆ ಸಲ್ಲಿಸುತ್ತಿದ್ದ ಸಹ ಶಿಕ್ಷಕರಲ್ಲಿ ಮುಖ್ಯ ಶಿಕ್ಷಕರಾಗಿ ಬಡ್ತಿ ಹೊಂದಿರುವವರಲ್ಲಿ ಪಿ.ಸಿ.ಎಂ. ಶಿಕ್ಷಕರೇ ಜಾಸ್ತಿ ಇದ್ದಾರೆ.

2. ಎಸ್.ಎಸ್.ಎಲ್.ಸಿ. ತರಗತಿಗಳಿಗೆ ವಿಶೇಷ ತರಗತಿ ಬೋಧನಾಂಶ ಅಭಾವವಿದ್ದುದರಿಂದ.

3. ಅನುದಾನ ರಹಿತ ಪ್ರೌಢಶಾಲೆಗಳಲ್ಲಿ ತರಬೇತಿ ಹೊಂದದೇ ಇರುವ ಅನುಭವಿ ಶಿಕ್ಷಕರ ಕೊರತೆ.

ಉ) ಹೌದು.

ಊ) ಈ ಸಂಬಂಧ ಕ್ರಮಗಳನ್ನು ಈ ಕೆಳಗೆ ನಮೂದಿಸಿದೆ :–

(1) ಶೇ. 40ಕ್ಕಿಂತ ಕಡಿಮೆ ಫಲಿತಾಂಶ ಬಂದಿರುವ ಶಾಲೆಗಳ ವಿಷಯ ಶಿಕ್ಷಕರ ಹಾಗೂ ಮುಖ್ಯ ಗುರುಗಳಿಗೆ ಕಾರಣ ಕೇಳುವ ನೋಟೀಸ್ ಜಾರಿ ಮಾಡಲಾಗುವುದು.

(2) ತಾಲ್ಲೂಕು ಮತ್ತು ಜಿಲ್ಲಾ ಮಟ್ಟದ ಶಿಕ್ಷಣಾಧಿಕಾರಿಗಳಿಗೆ ಕಡಿಮೆ ಫಲಿತಾಂಶ ಬಂದಿರುವ ಶಾಲೆಗಳನ್ನು ದತ್ತು ನೀಡಲಾಗಿದೆ.

(3) ಮೇಲ್ವಿಚಾರಣೆಯುಕ್ತ ಗುಂಪು ಅಭ್ಯಾಸ ಮಾಡಿಸಿ ವಿದ್ಯಾರ್ಥಿಗಳಲ್ಲಿ ಹೆಚ್ಚಿನ ಗುಣಮಟ್ಟ ಸುಧಾರಿಸಲು ಕ್ರಮ ಕೈಗೊಳ್ಳಲಾಗಿದೆ.

(4) ಮಂಡಳಿಯ ಪರೀಕ್ಷಾ ವಿಧಾನದಂತೆ ಎರಡುವರೆ ತಿಂಗಳಿಗೆ ಒಂದರಂತೆ 4 ಸರಣಿ ಪರೀಕ್ಷೆ Periodical test ತೆಗೆದುಕೊಂಡು ಕಲಿಕೆಯಲ್ಲಿ ಹಿಂದುಳಿದ ವಿದ್ಯಾರ್ಥಿಗಳಿಗೆ ಬೋಧನೆ ಮಾಡಲು ಕ್ರಮ ಕೈಗೊಳ್ಳಲಾಗಿದೆ.

(5) ಬಾಲ್ಕಿ ತಾಲ್ಲೂಕಿನ ಸರ್ಕಾರಿ ಪ್ರೌಢ ಶಾಲೆಗಳಲ್ಲಿರುವ ಖಾಲಿ ಇರುವ ಎಲ್ಲಾ ಹುದ್ದೆಗಳನ್ನು ಈಗ ಭರ್ತಿ ಮಾಡಲಾಗಿದೆ.

41(139) ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ (ಭಾಲ್ಕಿ) :– ಮಾನ್ಯ ಇಂಧನ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

ಅ) ಭಾಲ್ಕಿ ವಿಧಾನ ಸಭಾ ಕ್ಷೇತ್ರದಲ್ಲಿ ಈಗ ಕಾರ್ಯನಿರ್ವಹಿಸುತ್ತಿರುವ 33 ಕೆ.ವಿ. ಸ್ಟೇಷನ್‌ಗಳ ಸಂಖ್ಯೆ ಎಷ್ಟು ;

ಆ) ಈ ಕ್ಷೇತ್ರದ ಯಾವ ಯಾವ ಸ್ಥಳಗಳಲ್ಲಿ ಹೊಸದಾಗಿ 33 ಕೆ.ವಿ. ಸ್ಟೇಷನ್‌ಗಳನ್ನು ಸ್ಥಾಪಿಸಲಾಗುತ್ತಿದೆ ;